ಆ) ಯೋಜನೆ ಪೂರ್ಣಗೊಳಿಸಲು ಈ ವರ್ಷ ಬಜೆಟ್‌ನಲ್ಲಿ ಎಷ್ಟು ಹಣ ಒದಗಿಸಲಾಗಿದೆ;

ಇ) ಕಾಮಗಾರಿಯನ್ನು ಪೂರ್ಣಗೊಳಿಸಿ ರೈತರಿಗೆ ನೀರು ಒದಗಿಸಲು ಕಾಲಮಿತಿ ಏನಾದರೂ ಹಾಕಿಕೊಂಡಿದೆಯೇ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು)

ಅ) ಸಿಂಗಟಾಲೂರು–ಹುಲಿಗುಡ್ಡ ಏತ ನೀರಾವರಿ ಯೋಜನೆಗೆ ಜೂನ್ 2004ರ ಅಂತ್ಯದ ವರೆಗೆ ರೂ.2729.16 ಲಕ್ಷ ಮೊತ್ತವನ್ನು ವೆಚ್ಚ ಮಾಡಲಾಗಿದೆ.

ಆ) 2004–05ನೇ ಸಾಲಿನಲ್ಲಿ ಸದರಿ ಯೋಜನೆಗೆ ರೂ.1800 ಲಕ್ಷಗಳ ಅನುದಾನವನ್ನು ಒದಗಿಸಲಾಗಿದೆ.

ಇ) ಸದರಿ ಯೋಜನೆಯನ್ನು ಮಾರ್ಚ್ 2007ರೊಳಗೆ ಪೂರ್ಣಗೊಳಿಸಲು ಯೋಜಿಸಲಾಗಿದೆ.

601(783) : ಶ್ರೀ ಪಾಟೀಲ್ ಎಸ್.ಎಸ್. (ಮುಂಡರಗಿ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಹೆದ್ದಾರಿ ಸಂಖ್ಯೆ 63ರ ಗದಗ ಜಿಲ್ಲೆ ಗದಗ ತಾಲ್ಲೂಕು ಅಡವಿ ಸೋಮಾಪುರದಿಂದ ಮುಂಡರಗಿ–ಕೊರ್ಲಹಳ್ಳಿ–ಹಡಗಲಿ–ಇಟಗಿ–ಕೊಟ್ಟೂರು–ಉಜ್ಜಯಿನಿ–ಜಗಳೂರು ಮಾರ್ಗವಾಗಿ ಹೆದ್ದಾರಿ ಸಂಖ್ಯೆ 13ರವರೆಗೆ ಇದ್ದ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿ ಆಗಿ ಪರಿವರ್ತಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಸದ್ಯಕ್ಕೆ ಪ್ರಸ್ತಾವನೆ ಇರುವುದಿಲ್ಲ. ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಮೇಲ್ದರ್ಜೆಗೇರಿಸಲು ಕೇಂದ್ರ ಸರ್ಕಾರ ನೀಡಿರುವ ಮಾರ್ಗಸೂಚಿಗಳನ್ವಯ ಪರಿಶೀಲಿಸಿ ಸೂಕ್ತವಾದಲ್ಲಿ ಈ ಪ್ರಸ್ತಾವನೆಯನ್ನು ಪರಿಶೀಲಿಸಲಾಗುವುದು.

602(784) : ಶ್ರೀ ಪಾಟೀಲ್ ಎಸ್.ಎಸ್. (ಮುಂಡರಗಿ) ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಗದಗ ಜಿಲ್ಲೆ ಮುಂಡರಗಿ ತಾಲ್ಲೂಕು ಡೋಣಿ ಗ್ರಾಮದ ಹತ್ತಿರ ಕಟ್ಟುತ್ತಿರುವ ಹದ್ದಿನಬಂಡಿ ಬಾಂದಾರದ ಯೋಜನೆಯ ಅಂದಾಜು ವೆಚ್ಚ ಎಷ್ಟು;

ಆ) ಕಾಮಗಾರಿಯನ್ನು ಎಂದಿನಿಂದ ಪ್ರಾರಂಭಿಸಲಾಗಿದೆ ಹಾಗೂ ಸದರಿ ಯೋಜನೆ ಮುಗಿಯಲು ಇದ್ದ ಅವಧಿ ಎಷ್ಟು;

ಇ) ಇನ್ನೂ ಮುಗಿಯದಿರಲು ಕಾರಣಗಳೇನು;

ಈ) ಇದನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು)

ಅ) 28.95 ಲಕ್ಷ ರೂ.ಗಳು

ಆ) ದಿನಾಂಕ 1–9–2000ರಂದು ಪ್ರಾರಂಭಿಸಲಾಗಿದೆ. ಈ ಕಾಮಗಾರಿಯನ್ನು ಮುಗಿಸಲು 4 ತಿಂಗಳ ಕಾಲಾವಧಿ ಕೊಡಲಾಗಿದೆ.

ಇ) ಗುತ್ತಿಗೆದಾರರಿಗೆ ಕಾಮಗಾರಿಯ ಹಣ ಸಂದಾಯವಾಗದ ಕಾರಣ ಕಾಮಗಾರಿಯನ್ನು ಟೆಂಡರಿನಲ್ಲಿ ನಿಗದಿಪಡಿಸಿದ ಅವಧಿಯಲ್ಲಿ ಮುಗಿಸಿಕೊಳ್ಳುವುದಿಲ್ಲ.

ಈ) ಅನುದಾನದ ಲಭ್ಯತೆ ಮೇಲೆ ಪೂರ್ಣಗೊಳಿಸಲಾಗುವುದು.

603(785) : ಶ್ರೀ ಪಾಟೀಲ್ ಎಸ್.ಎಸ್. (ಮುಂಡರಗಿ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಲೋಕೋಪಯೋಗಿ ಇಲಾಖೆಗೆ ಸೇರಿದ ರಸ್ತೆಗಳ ದುರಸ್ತಿಗಾಗಿ ಪ್ರತಿ ಕಿಲೋ ಮೀಟರ್‌ಗೆ ಎಷ್ಟು ಹಣ ಒದಗಿಸಲಾಗಿದೆ;

ಆ) ಮುಂಡರಗಿ ಕ್ಷೇತ್ರದಲ್ಲಿ ಲೋಕೋಪಯೋಗಿ ಇಲಾಖೆಗೆ ಸೇರಿದ ರಸ್ತೆಗಳೆಷ್ಟು; (ಕಿಲೋ ಮೀಟರ್ ವಿವರ ನೀಡುವುದು);

ಇ) ಸದರಿ ರಸ್ತೆಗಳು ಹಾಳಾಗಿದ್ದು, ಅವುಗಳನ್ನು ದುರಸ್ತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳದಿರಲು ಕಾರಣಗಳೇನು;

ಈ) ಕೂಡಲೇ ಗುಂಡಿಗಳನ್ನು ಮುಚ್ಚಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಜಿಲ್ಲಾ ಮುಖ್ಯ ರಸ್ತೆಗಳ ನಿರ್ವಹಣೆಗೆ ಹಾಗೂ ಲೋಕೋಪಯೋಗಿ ಇಲಾಖೆಯಲ್ಲಿ ಬಾಕಿ ಉಳಿದ ರಾಜ್ಯ ಹೆದ್ದಾರಿಗಳ ನಿರ್ವಹಣೆಗೆ ಪ್ರತಿ ಕಿಮೀ ರೂ. 10,000ದಂತೆ ದುರಸ್ತಿಗಾಗಿ 2003-04ನೇ ಸಾಲಿಗೆ ಅನುದಾನ ಬಿಡುಗಡೆ ಮಾಡಲಾಗಿದೆ.

ಆ) ಮುಂಡರಗಿ ತಾಲ್ಲೂಕಿನಲ್ಲಿ ಲೋಕೋಪಯೋಗಿ ಇಲಾಖೆಗೆ ಸೇರಿದ ರಸ್ತೆಗಳ ವಿವರ ಈ ಕೆಳಗಿನಂತೆ ಇದೆ.

	ಸಂಖ್ಯೆ	ಉದ್ದ
ರಾಜ್ಯ ಹೆದ್ದಾರಿ	2	72.69 ಕಿಮೀ
ಜಿಲ್ಲಾ ಮುಖ್ಯ ರಸ್ತೆ	7	116.31 ಕಿಮೀ
ಒಟ್ಟು	**9**	**189.00 ಕಿಮೀ**

ಇ,ಈ) ಗುಂಡಿಗಳನ್ನು ಮುಚ್ಚುವ ಕಾರ್ಯಕ್ರಮವನ್ನು ಕೈಗೆತ್ತಿಕೊಂಡಿದ್ದು ಇದಕ್ಕೆ ಟೆಂಡರ್‌ಗಳನ್ನು ಆಹ್ವಾನಿಸಲಾಗಿರುತ್ತದೆ ಹಾಗೂ ಈ ಕಾರ್ಯಕ್ರಮವನ್ನು ಸಧ್ಯದಲ್ಲಿ ಪೂರ್ಣಗೊಳಿಸಿ ಸುಸ್ಥಿತಿಯಲ್ಲಿ ಇಡಲಾಗುವುದು.

604(786) : ಶ್ರೀ ಪಾಟೀಲ್ ಎಸ್.ಎಸ್. (ಮುಂಡರಗಿ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಗದಗ ಜಿಲ್ಲೆ ಮುಂಡರಗಿ ತಾಲ್ಲೂಕಿನ ಕೊರ್ಲಹಳ್ಳಿ ಬಳಿ ಸೇತುವೆ ನಿರ್ಮಾಣ ಮಾಡುವುದರಿಂದ ಗದಗ-ಮುಂಡರಗಿ-ಹಡಗಲಿ ಮಾರ್ಗವಾಗಿ ಬೆಂಗಳೂರಿಗೆ ಹೋಗಲು ಎಷ್ಟು ಕಿಲೋಮೀಟರ್ ಉಳಿತಾಯವಾಗಿದೆ;

ಆ) ಸದರಿ ಸೇತುವೆ ಆದ ನಂತರ ವಾಹನಗಳ ಸಂಚಾರ ಹೆಚ್ಚಾಗಿರುವುದು ನಿಜವೇ;